# ಕರ್ನಾಟಕ ಸರ್ಕಾರದ ನಡವಳಿಗಳು
## ಜಲಸಂಪನ್ಮೂಲ ಇಲಾಖೆ

**ವಿಷಯ**:- ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ನೇತ್ರಾವತಿ ನದಿಗೆ ಅಡ್ಡಲಾಗಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಿಸಿ, ಸುತ್ತಮುತ್ತಲಿನ ಹಳ್ಳಿಗಳಿಗೆ ಕುಡಿಯುವ ನೀರು, ಸುಮಾರು 1100 ಹೆಕ್ಟೇರ್ ಜಮೀನುಗಳಿಗೆ ನೀರಾವರಿ ಸೌಲಭ್ಯ ಕಲ್ಪಿಸಲು ಹಾಗೂ ನದಿ ದಂಡೆಗಳನ್ನು ಸುಭದ್ರಗೊಳಿಸುವ ಕಾಮಗಾರಿಗಳನ್ನು ಎರಡು ಹಂತಗಳಲ್ಲಿ ಕೈಗೊಳ್ಳುವ 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಿರುವ ರೂ.240.00 ಕೋಟಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು..

**ಓದಲಾಗಿದೆ**:- ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ಬೆಂಗಳೂರು ಇವರ ಪತ್ರ ಸಂಖ್ಯೆ:ಕನೀನಿ/ ಟಿವಿಪಿ/ಬೆಳ್ತಂಗಡಿ ಏನೀಯೋ/2020-21/3750, ದಿನಾಂಕ:04.11.2020, ಸಂಖ್ಯೆ 5199 ದಿನಾಂಕ:02.11.2020 & ಸಂಖ್ಯೆ.0786 ದಿನಾಂಕ: 07.06.2021.

---***---

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ, ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕಿನಡಿ ಬರುವ ಅನೇಕ ಗ್ರಾಮಗಳಲ್ಲಿ, ಬೇಸಿಗೆ ಕಾಲದಲ್ಲಿ ಅಂತರ್ಜಲ ಮಟ್ಟ ತೀವ್ರವಾಗಿ ಕುಸಿಯುತ್ತಿದ್ದು, ಕುಡಿಯುವ ನೀರಿಗೆ ಕೊರತೆ ಉಂಟಾಗಿರುತ್ತದೆ. ಮಳೆಯ ಅಭಾವದಿಂದ ನಾಲೆಗಳಲ್ಲಿ ಅವಶ್ಯ ನೀರು ಹರಿಯದೆ, ಮುಂಗಾರು ಬೆಳೆಗೆ ನೀರಿನ ಕೊರತೆ ಉಂಟಾಗಿರುತ್ತದೆ. ಹಾಗೂ ಬೆಳ್ತಂಗಡಿ ತಾಲ್ಲೂಕಿನಲ್ಲಿ ಕುಡಿಯುವ ನೀರಿನ ಕೊರತೆ ಇರುವುದರಿಂದ ನೇತ್ರಾವತಿ ನದಿಗೆ ಅಡ್ಡಲಾಗಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಿಸಿ, ಸುತ್ತಮುತ್ತಲಿನ ಹಳ್ಳಿಗಳಿಗೆ ಕುಡಿಯುವ ನೀರು ಹಾಗೂ ಸುಮಾರು 1100 ಹೆಕ್ಟೇರ್ ಜಮೀನುಗಳಿಗೆ ಏತ ನೀರಾವರಿ ಸೌಲಭ್ಯವನ್ನು ಕಲ್ಪಿಸುವಂತೆ ಸ್ಥಳೀಯ ರೈತರು ಮತ್ತು ಜನಪ್ರತಿನಿಧಿಗಳು ಕೋರಿರುವುದಾಗಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ತಿಳಿಸಿರುತ್ತಾರೆ.

ಸದರಿ ಯೋಜನೆಯ ರೂ.240.00 ಕೋಟಿಗಳ ವಿವರವಾದ ಯೋಜನಾ ವರದಿಯನ್ನು ದಿನಾಂಕ:05.10.2020 ರಂದು ಜರುಗಿದ ನಿಗಮದ ನಿರ್ದೇಶಕರ ಮಂಡಳಿಯ 93ನೇ ಸಭೆಯಲ್ಲಿ ಮಂಡಿಸಲಾಗಿ, ಮಂಡಳಿಯು ಸದರಿ ಪ್ರಸ್ತಾವನೆಗೆ ಅನುಮೋದನೆ ನೀಡಿರುತ್ತದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ತಿಳಿಸಿರುತ್ತಾರೆ.

ಈ ಹಿನ್ನಲೆಯಲ್ಲಿ ಬೆಳ್ತಂಗಡಿ ತಾಲ್ಲೂಕಿನಲ್ಲಿ ನೇತ್ರಾವತಿ ನದಿಗೆ ಅಡ್ಡಲಾಗಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಿಸಿ, 0.39Mcum ಪ್ರಮಾಣದ ನೀರನ್ನು ಬಳಸಿ, ಸುತ್ತಮುತ್ತಲಿನ ಹಳ್ಳಿಗಳಿಗೆ ಕುಡಿಯುವ ನೀರು, ಸುಮಾರು 1100 ಹೆಕ್ಟೇರ್ ಜಮೀನುಗಳಿಗೆ ನೀರಾವರಿ ಸೌಲಭ್ಯ ಕಲ್ಪಿಸಲು ಹಾಗೂ ನದಿ ದಂಡೆಗಳನ್ನು ಸುಭದ್ರಗೊಳಿಸುವ ಕಾಮಗಾರಿಗಳನ್ನು ಎರಡು ಹಂತ(ಹಂತ-1ರಲ್ಲಿ ರೂ.173.78 ಕೋಟಿ + ಹಂತ-2ರಲ್ಲಿ ರೂ.66.22 ಕೋಟಿ)ಗಳಲ್ಲಿ ಕೈಗೊಳ್ಳುವ 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಿರುವ ರೂ.240.00 ಕೋಟಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ರವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**<u>ಸರ್ಕಾರದ ಆದೇಶ ಸಂಖ್ಯೆ:ಜಸಂಇ 35 ಎಂಎಂಎಂ 2020, ಬೆಂಗಳೂರು,</u>**
**<u>ದಿನಾಂಕ: 16.06.2021</u>**

ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ನೇತ್ರಾವತಿ ನದಿಗೆ ಅಡ್ಡಲಾಗಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಿಸಿ, ಸುತ್ತಮುತ್ತಲಿನ ಹಳ್ಳಿಗಳಿಗೆ ಕುಡಿಯುವ ನೀರು, ಸುಮಾರು 1100 ಹೆಕ್ಟೇರ್ ಜಮೀನುಗಳಿಗೆ ನೀರಾವರಿ ಸೌಲಭ್ಯ ಕಲ್ಪಿಸಲು ಹಾಗೂ ನದಿ ದಂಡೆಗಳನ್ನು ಸುಭದ್ರಗೊಳಿಸುವ ಕಾಮಗಾರಿಗಳನ್ನು ಎರಡು ಹಂತಗಳಲ್ಲಿ, ಅಂದರೆ ಮೊದಲನೇ ಹಂತದಲ್ಲಿ ರೂ.173.78 ಕೋಟಿ ಮತ್ತು ಎರಡನೇ ಹಂತದಲ್ಲಿ ರೂ.66.22 ಕೋಟಿ ಮೊತ್ತದಲ್ಲಿ ಕಾಮಗಾರಿ ಕೈಗೆತ್ತಿಕೊಳ್ಳಲು ಹಾಗೂ ಪ್ರಸಕ್ತ ಸಾಲಿನಲ್ಲಿ ಮೊದಲನೇ ಹಂತದ ಕಾಮಗಾರಿಗೆ ಟೆಂಡರ್ ಆಹ್ವಾನಿಸುವ ಷರತ್ತಿಗೊಳಪಟ್ಟು, 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಿರುವ ರೂ.240.00 ಕೋಟಿಗಳ (ಇನ್ನೂರ ನಲವತ್ತುಕೋಟಿ ರೂಪಾಯಿಗಳು ಮಾತ್ರ) ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿಎಸ್ 02 ಎಂಸಿಎಂ 2021-ಪಿಪಿಡಿ, ದಿನಾಂಕ:02.01.2021ರಲ್ಲಿ ಹಾಗೂ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 2 ಆಕೋ-1/2021 (ಇ-ಆಫೀಸ್) ದಿನಾಂಕ:16.06.2021ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

16/6/21

**(ಶ್ರೀಹರಿ ಎಸ್.ಆರ್)**
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-1)
ಜಲಸಂಪನ್ಮೂಲ ಇಲಾಖೆ

ಪ್ರತಿಯನ್ನು:
1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
2. ಪ್ರಧಾನ ಮಹಾಲೇಖಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
3. ಪ್ರಧಾನ ಮಹಾಲೇಖಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ) ಕರ್ನಾಟಕ ಬೆಂಗಳೂರು 01.
4. ಸರ್ಕಾರದ ಉಪಕಾರ್ಯದರ್ಶಿಗಳು (ಸಚಿವ ಸಂಪುಟ ಶಾಖೆ) ವಿಧಾನ ಸೌಧ.
5. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ತುಂಗಾ ಮೇಲ್ದಂಡೆ ಯೋಜನಾ ವಲಯ, ಶಿವಮೊಗ್ಗ.
8. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ, ಆರ್ಥಿಕ ಕೋಶ) ವಿಧಾನ ಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯರ್ಶಿ, ಯೋಜನಾ ಇಲಾಖೆ.
11. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ.
12. ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಜಲಸಂಪನ್ಮೂಲ ಇಲಾಖೆ.
13. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, (ಕೃ.ಭಾ.ಜ.ನಿ), ಜಸಂಇಲಾಖೆ.
14. ತಾಂತ್ರಿಕ ಸಹಾಯಕರು, ತಾಂತ್ರಿಕ-6, ಜ.ಸಂ.ಇ.
15. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

2. ಪ್ರಧಾನ ಮಹಾಲೇಖಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ) ಕರ್ನಾಟಕ ಬೆಂಗಳೂರು.
4. ಸರ್ಕಾರದ ಉಪಕಾರ್ಯದರ್ಶಿ, (ಸಚಿವ ಸಂಪುಟ ಶಾಖೆ) ವಿಧಾನಸೌಧ. (ಸಚಿವ ಸಂಪುಟ ಪ್ರಕರಣ ಸಂಖ್ಯೆ:ಸಿ:237/2021, ದಿನಾಂಕ:21.06.2021ರ ಮೇರೆಗೆ)
5. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
6. The Chief General Manager, NABARD, NABARD Towers, No.46 KG Road, Post Box -9944, Bengaluru -560009.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
8. ಮುಖ್ಯ ಇಂಜಿನಿಯರ್, ನೀರಾವರಿ ಕೇಂದ್ರ ವಲಯ, ಮುನಿರಾಬಾದ್.
9. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ, ಆರ್ಥಿಕ ಕೋಶ) ವಿಧಾನ ಸೌಧ, ಬೆಂಗಳೂರು.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ.
11. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ.
12. ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಜಲಸಂಪನ್ಮೂಲ ಇಲಾಖೆ.
13. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, (ಕೃ.ಭಾ.ಜ.ನಿ.) ಜ.ಸಂ. ಇಲಾಖೆ.
14. ತಾಂತ್ರಿಕ ಸಹಾಯಕರು, (ತಾಂತ್ರಿಕ-6) ಜಲ ಸಂಪನ್ಮೂಲ ಇಲಾಖೆ.
15. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.